86

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ. ನಾಗರಾಜು ಇವರು ಶೂನ್ಯವೇಳೆಯಲ್ಲಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ

**ವಿಷಯ:**

ದಿನಾಂಕ: 13-03-2025 ರಂದು "ತ್ಯಾಜ್ಯ ವಿಲೇವಾರಿಗೆ ಕಣ್ಣೂರು ತಡೆ" ಎಂದು ಪ್ರಜಾವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ. "ಬೆಂಗಳೂರು ನಗರದ ಹಲವು ಭಾಗಗಳಿಂದ ತ್ಯಾಜ್ಯ ಸಂಗ್ರಹಿಸುವ 300 ಕ್ಕೂ ಹೆಚ್ಚು ಕಾಂಪ್ಯಾಕ್ಟರ್‌ಗಳು ಖಾಲಿಯಾಗಿಲ್ಲ. ಮಿಟ್ಟಗಾನಹಳ್ಳಿ ಭೂಭರ್ತಿ ಪ್ರದೇಶದಲ್ಲಿ ಕಾಂಪ್ಯಾಕ್ಟರ್‌ಗಳು ಎರಡು ದಿನಗಳಿಂದ ಸಾಲುಗಟ್ಟಿ ನಿಂತಿರುವುದರಿಂದ, ನಗರದ ರಸ್ತೆಗಳಲ್ಲಿ ತ್ಯಾಜ್ಯ ತುಂಬಿಕೊಳ್ಳುತ್ತಿದೆ.

ಅವೈಜ್ಞಾನಿಕವಾಗಿ ತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದ್ದು, ಸುತ್ತಮುತ್ತಲಿನ ಪರಿಸರ ಹಾಳಾಗುತ್ತಿದೆ. ದ್ರವತ್ಯಾಜ್ಯ (ಲೀಚೆಟ್) ಹೆಚ್ಚಾಗಿ ಹೊರಬರುತ್ತಿದ್ದು, ಸುತ್ತಮುತ್ತಲಿನ ಕೆರೆ, ಕುಂಟೆ, ಬಾವಿಗಳು, ಕೊಳವೆ ಬಾವಿಗಳು ಕಲುಷಿತಗೊಂಡಿವೆ. ದಿನಬಳಕೆ ನೀರಿನಲ್ಲಿ ಈ ಕಲ್ಮಶ ಸೇರಿಕೊಂಡು ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಆದ್ದರಿಂದ ಅವೈಜ್ಞಾನಿಕ ತ್ಯಾಜ್ಯ ವಿಲೇವಾರಿಯನ್ನು ಸ್ಥಗಿತಗೊಳಿಸಿ ಎಂದು ಗ್ರಾಮಸ್ಥರು ಅಗ್ರಹಿಸಿ ಹೋರಾಟ ನಡೆಸುತ್ತಿದ್ದಾರೆ. ಮಿಟ್ಟಗಾನಹಳ್ಳಿ ಗ್ರಾಮದ ಸರ್ಕಾರಿ ಗೋಮಾಳದ ಜಮೀನಿನಲ್ಲಿ ಬಿಬಿಎಂಪಿ ಒಂಭತ್ತು ವರ್ಷದಿಂದ ಕಸ ವಿಲೇವಾರಿ ಮಾಡುತ್ತಿದೆ. ಆದರೆ, ಇಲ್ಲಿನ ಪರಿಸರದ ಬಗ್ಗೆ ಕಾಳಜಿ ವಹಿಸದೆ, ವಿಲೇವಾರಿ ಆರಂಭಿಸುವ ಮೊದಲು ನೀಡಿದ ಭರವಸೆಯನ್ನು ಈಡೇರಿಸಿಲ್ಲ. ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತರವರಿಗೆ ಈ ಬಗ್ಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಮಿಟ್ಟಗಾನಹಳ್ಳಿ ಭೂಭರ್ತಿ ಪ್ರದೇಶದಿಂದ ಹರಿಯುವ ದ್ರವ ತ್ಯಾಜ್ಯದಿಂದ ಬೆಳ್ಳಹಳ್ಳಿ ಕೆರೆ, ಕಣ್ಣೂರು ಕೆರೆ, ಚಿಕ್ಕಗುಬ್ಬಿ ಕೆರೆ, ದೊಡ್ಡಗುಬ್ಬಿ ಕೆರೆ ಹಾಗೂ ರಾಂಪುರ ಕೆರೆಗಳು ಮಲೀನಗೊಂಡಿದ್ದು, ಸಾವಿರಾರು ಮೀನುಗಳು ಸಾಯುತ್ತಿವೆ. ಅಂತರ್ಜಲ ಕೂಡ ಕಲುಷಿತಗೊಂಡಿದೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟಿತವಾಗಿದ್ದು, ಬೆಂಗಳೂರು ನಗರದ ತ್ಯಾಜ್ಯ ವಿಲೇವಾರಿಗಾಗಿ ಸರ್ಕಾರವು ಹಲವಾರು ಕ್ರಮಗಳನ್ನು ಕೈಗೊಂಡರೂ ಈ ಸಮಸ್ಯೆ ಪದೇ ಪದೇ ಏಕೆ ಉದ್ಭವಿಸುತ್ತಿದೆ. ಈ ರೀತಿ ಅವೈಜ್ಞಾನಿಕವಾಗಿ ತ್ಯಾಜ್ಯ ವಿಲೇವಾರಿಯಿಂದ ಸದರಿ ಗ್ರಾಮಸ್ಥರ ಆರೋಗ್ಯದ ಮೇಲೆ ಪರಿಣಾಮಗಳು ಬೀರುತ್ತಿರುವುದು ಹಲವಾರು ಪ್ರಕರಣಗಳಲ್ಲಿ ಕಾಣಿಸಿಕೊಂಡಿವೆ. ಆದ್ದರಿಂದ ಘನತ್ಯಾಜ್ಯ ವಿಲೇವಾರಿ ಕುರಿತು ಶೀಘ್ರ ಮತ್ತು ಶಾಶ್ವತ ಪರಿಹಾರ ಕೈಗೊಳ್ಳುವ ಕುರಿತು.

**ಉತ್ತರ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುತ್ತಿರುವ ಅಂದಾಜು 6,200-6,500 ಟನ್ ಘನತ್ಯಾಜ್ಯದ ಪೈಕಿ ಅಂದಾಜು 3,380 ತ್ಯಾಜ್ಯವನ್ನು ಸಂಸ್ಕರಿಸಲಾಗುತ್ತಿರುತ್ತದೆ. ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆಯ ಪ್ರಮಾಣವನ್ನು ವೃದ್ಧಿಸಲು ದಿನಂಪ್ರತಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮಗಳ ಮೂಲಕ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದು ಒಂದು ನಿರಂತರ ಪ್ರಕ್ರಿಯೆಯಾಗಿರುತ್ತದೆ. ಆದರೂ ಸಹ ತ್ಯಾಜ್ಯ ವಿಂಗಡಣಾ ಕೊರತೆಯಿಂದಾಗಿ ಮತ್ತು ಸಂಸ್ಕರಣಾ ಘಟಕಗಳ ಸಾಮರ್ಥ್ಯದ ಕೊರತೆಯಿಂದಾಗಿ ಪ್ರತಿನಿತ್ಯ ಸುಮಾರು 2,800 ರಿಂದ 3,000 ಮೆ.ಟನ್‌ರಷ್ಟು ಮಿಶ್ರತ್ಯಾಜ್ಯವನ್ನು ವೈಜ್ಞಾನಿಕವಾಗಿ ಪ್ರಸ್ತುತ ಮಿಟ್ಟಗಾನಹಳ್ಳಿ / ಕಣ್ಣೂರು / ಬಾಗಲೂರು ಭೂಭರ್ತಿ ಘಟಕಗಳಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ದಿನಾಂಕ: 11-03-2025 ರಂದು ಕಣ್ಣೂರು / ಮಿಟ್ಟಗಾನಹಳ್ಳಿ ಗ್ರಾಮದ ನಿವಾಸಿಗಳು ಏಕಾಏಕಿ ರಸ್ತೆ ತಡೆ ನಡೆಸಿದ್ದು, ತ್ಯಾಜ್ಯ ವಿಲೇವಾರಿಯಲ್ಲಿ ವ್ಯತ್ಯಯ ಉಂಟಾಗಿರುತ್ತದೆ. ಆನಂತರ ಗ್ರಾಮದ ನಿವಾಸಿಗಳ ಮನವೊಲಿಸಿ ತ್ಯಾಜ್ಯವನ್ನು ವಿಲೇವಾರಿ ಮಾಡಲು ಕ್ರಮ ವಹಿಸಲಾಗಿರುತ್ತದೆ. ಪ್ರತಿನಿತ್ಯ ಸುಮಾರು 360-380 ಕಾಂಪ್ಯಾಕ್ಟರ್ ವಾಹನಗಳಿಂದ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗುತ್ತಿದ್ದು, ದಿನಾಂಕ 12-03-2025 ರಂದು 384 ಕಾಂಪ್ಯಾಕ್ಟರ್ ವಾಹನಗಳಿಂದ ಹಾಗೂ ದಿನಾಂಕ: 13-03-2025 ರಂದು 379 ಕಾಂಪ್ಯಾಕ್ಟರ್ ವಾಹನಗಳಿಂದ ತ್ಯಾಜ್ಯವನ್ನು ಭೂಭರ್ತಿ ಪ್ರದೇಶದಲ್ಲಿ ವಿಲೇವಾರಿ

ಮಾಡಲಾಗಿರುತ್ತದೆ. ಕಣ್ಣೂರು / ಮಿಟ್ಟಗಾನಹಳ್ಳಿ ಭೂಭರ್ತಿ ಪ್ರದೇಶದಲ್ಲಿ ಲೀಚೆಟ್ ತ್ಯಾಜ್ಯ ಸಂಸ್ಕರಣೆಗೆ ಪ್ರತಿನಿತ್ಯ 25 ಕೆ.ಎಲ್.ಡಿ. ಸಾಮರ್ಥ್ಯದ ಮತ್ತು ಪ್ರತಿನಿತ್ಯ 100 ಕೆ.ಎಲ್.ಡಿ. ಸಾಮರ್ಥ್ಯದ ಲೀಚೆಟ್ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ (ಪ್ರಸ್ತುತ 25 ಕೆ.ಎಲ್.ಡಿ. ಸಾಮರ್ಥ್ಯದ ಘಟಕ ದುರಸ್ಥಿಯಲ್ಲಿರುತ್ತದೆ). ಇದರೊಂದಿಗೆ ಪಾರಂಪರಿಕ ಲೀಚೆಟ್ ತ್ಯಾಜ್ಯ ಸಂಸ್ಕರಣೆಗೆ ಅನುಮೋದನೆ ನೀಡಲಾಗಿದ್ದು, ನಿಯಮಾವಳಿಯಂತೆ ಲೀಚೆಟ್ ತ್ಯಾಜ್ಯ ಸಂಸ್ಕರಣೆ ಘಟಕ ಸ್ಥಾಪನೆಗೆ ಶೀಘ್ರದಲ್ಲಿ ಕ್ರಮವಹಿಸಲಾಗುವುದು. ಭೂಭರ್ತಿ ಪ್ರದೇಶದ ಸುತ್ತಮುತ್ತಲಿನ ಕೆರೆಗಳು ಮಲಿನಗೊಳ್ಳದಂತೆ ಪಾಲಿಕೆ / ಬಿಎಸ್‌ಡಬ್ಲ್ಯೂಎಮ್‌ಎಲ್ ವತಿಯಿಂದ ಕೆರೆಗಳ ಅಭಿವೃದ್ಧಿ ಕಾರ್ಯಕ್ಕೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿರುತ್ತದೆ. ಸುತ್ತಮುತ್ತಲಿನ ಅಂತರ್ಜಲ ಮಾಲಿನ್ಯದ ಕುರಿತು ನಿಗಾ ಇಡಲಾಗುತ್ತಿದ್ದು, ಆಗಿಂದಾಗ್ಗೆ ಅಂತರ್ಜಲ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಅಂತರ್ಜಲ ಮಲಿನವಾಗಿರುವ ಕುರಿತು ವರದಿ ಬಂದಿರುವುದಿಲ್ಲ.

ಪಾಲಿಕೆ ವ್ಯಾಪ್ತಿಯಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಸಾಕಷ್ಟು ಕ್ರಮ ಕೈಗೊಳ್ಳಲಾಗಿಯೂ ಸಹ ತ್ಯಾಜ್ಯ ಸಮಸ್ಯೆ ಪದೇ ಪದೇ ಉದ್ಭವಿಸುತ್ತಿರುವುದನ್ನು ಮನಗಂಡ ಸರ್ಕಾರವು **"ಬ್ರ್ಯಾಂಡ್ ಬೆಂಗಳೂರು-ಸ್ವಚ್ಛ ಬೆಂಗಳೂರು"** ಪರಿಕಲ್ಪನೆಯಡಿ ಪಾಲಿಕೆಯ ನಾಲ್ಕು ದಿಕ್ಕುಗಳಲ್ಲಿ 30 ವರ್ಷಗಳವರೆಗೆ ತ್ಯಾಜ್ಯ ನಿರ್ವಹಿಸಲು 04 ಸಮಗ್ರ ತ್ಯಾಜ್ಯ ನಿರ್ವಹಣೆ ಘಟಕಗಳನ್ನು ನಿರ್ಮಿಸಲು ಟೆಂಡರ್ ಕರೆಯಲು ಕ್ರಮ ವಹಿಸಲಾಗುತ್ತಿದೆ. ಈ ಮೂಲಕ ಪಾಲಿಕೆ ವ್ಯಾಪ್ತಿಯಲ್ಲಿ ತ್ಯಾಜ್ಯ ವಿಲೇವಾರಿಗೆ ಶಾಶ್ವತ ಪರಿಹಾರ ಒದಗಿಸಲಾಗುವುದು.

---

**ಸಂಖ್ಯೆ: ನಅಇ 159 ಎಂಎನ್‌ವೈ 2025 (ಇ)**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ